# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 288
ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ).
ಉತ್ತರಿಸುವ ದಿನಾಂಕ : 12.07.2018.
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ವೇತನಾನುದಾನಕ್ಕೆ ಒಳಪಟ್ಟ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;</td><td>
<table>
<tr><th>ವಿಭಾಗ</th><th>ಬೋಧಕ</th><th>ಬೋಧಕೇತರ</th></tr>
<tr><td>ಪದವಿ ಪೂರ್ವ</td><td>6438</td><td>3029</td></tr>
<tr><td>ಪ್ರೌಢ (ಡೈಸ್ ಮಾಹಿತಿಯಂತೆ)</td><td>28188</td><td>2443</td></tr>
<tr><td>ಪ್ರಾಥಮಿಕ (ಡೈಸ್ ಮಾಹಿತಿಯಂತೆ)</td><td>15931</td><td>-</td></tr>
<tr><td>ಒಟ್ಟು</td><td>50557</td><td>5472</td></tr>
</table>
</td></tr>
<tr><td>ಆ)</td><td>ಸದರಿ ಸಿಬ್ಬಂದಿಗಳಿಗೆ ರಾಜ್ಯ ಸರ್ಕಾರಿ ನೌಕರರಿಗೆ ದೊರಕುವಂತಹ ವೈದ್ಯಕೀಯ (ಜ್ಯೋತಿ ಸಂಜೀವಿನಿ) ಸೌಲಭ್ಯಗಳು ದೊರಕುತ್ತಿಲ್ಲ ಎಂಬುದು ಸರ್ಕಾರದ ಗಮನದಲ್ಲಿ ಇದೆಯೇ;</td><td>ಹೌದು</td></tr>
<tr><td>ಇ)</td><td>ರಾಜ್ಯ ಸರ್ಕಾರಿ ನೌಕರರಿಗೆ ಸಿಗುವಂತಹ 'ಜ್ಯೋತಿ ಸಂಜೀವಿನಿ' ಮತ್ತು ಮರುಪಾವತಿಯಂತಹ ಯೋಜನೆಗಳನ್ನು ಅನುದಾನಿತ ಸಿಬ್ಬಂದಿಗಳಿಗೂ ನೀಡುವ ಬಗ್ಗೆ ಸರ್ಕಾರ ಆಲೋಚಿಸಿದೆಯೇ;</td><td>ಹೌದು</td></tr>
<tr><td>ಈ)</td><td>ಆಲೋಚಿಸಿದ್ದಲ್ಲಿ, ಅನುಷ್ಠಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗೂ ಅನುಷ್ಠಾನ ಮಾಡಲಾಗುವುದು ಯಾವಾಗ? (ವಿವರ ನೀಡುವುದು)</td><td>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ. ಆದ್ದರಿಂದ, ಇವರು ಜ್ಯೋತಿ ಸಂಜೀವಿನಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.<br><br>ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು-1999, ಅನುಬಂಧ-II (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.</td></tr>
</table>

(ಸಂಖ್ಯೆ: ಇಡಿ 375 ಎಸ್‌ಇಎಸ್ 2018)

(ಎನ್.ಮಹೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.